ಎಂ.ವಿ.ಸಿ ನಂ.365/2024
ಪಿ. ಡಬ್ಲ್ಯೂ .1

**ಸಾಕ್ಷಿಯನ್ನು ದಿನಾಂಕ 05.03.2026 ರಂದು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರ ಪರ ವಕೀಲರಿಂದ**

ಅಪಘಾತ ಕಾಲಕ್ಕೆ ನಾನು ಹುಬ್ಬಳ್ಳಿಯಿಂದ ಬೆಳಗಾವಿ ಕಡೆಗೆ ಬೈಕಿನಲ್ಲಿ ಹೋಗುತ್ತಿದ್ದೆ. ಅಪಘಾತವು ಸಿಂಗಲ್ ರಸ್ತೆಯಲ್ಲಿ ಆಗಿರುತ್ತದೆ ಅಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಹೈವೆ ರಸ್ತೆಯಾಗಿರುತ್ತದೆ ಎನ್ನುತ್ತಾರೆ. ನಾನು ಹೋಗುತ್ತಿದ್ದ ಬೈಕಿನ ಮಾಲೀಕ ನನ್ನ ಚಿಕ್ಕಪ್ಪನ ಮಗ ಆಗಿರುತ್ತಾನೆ. ನನ್ನ ಬಳಿ ಡಿ.ಎಲ್.ಇರಲಿಲ್ಲ ಅಂದರೆ ಸರಿಯಲ್ಲ. ಅಪಘಾತ ಕಾಲಕ್ಕೆ ನಾನು ಹೋಗುತ್ತಿದ್ದ ಬೈಕಿಗೆ ವಿಮೆ ಇರಲಿಲ್ಲ ಅಂದರೆ ಸರಿಯಲ್ಲ. ಅಪಘಾತ ಕಾಲಕ್ಕೆ ಟಿಪ್ಪರ್ ಗಾಡಿ ನಂಬರ್ ಕೆಎ-17/ಸಿ-6497 ರ ಚಾಲಕ ತನ್ನ ವಾಹನವನ್ನು ನಿಧಾನವಾಗಿ ಚಾಲನೆ ಮಾಡುತ್ತಿದ್ದು ನಾನು ನನ್ನ ಬೈಕನ್ನು

ಅತೀ ವೇಗ ಮತ್ತು ನಿಷ್ಕಾಳಜಿತನದಿಂದ ಚಾಲನೆ ಮಾಡಿ ಸದರಿ ಟಿಪ್ಪರಿಗೆ ಅಡ್ಡ ಬಂದಿದ್ದರಿಂದ ಅಪಘಾತ ಆಗಿರುತ್ತದೆ ಅಂದರೆ ಸರಿಯಲ್ಲ. ಅಪಘಾತ ನನ್ನ ತಪ್ಪಿನಿಂದ ಆಗಿದ್ದು ಟಿಪ್ಪರ್ ಚಾಲಕನ ತಪ್ಪಿನಿಂದ ಅಲ್ಲ ಅಂದರೆ ಸರಿಯಲ್ಲ.

ಈ ಅರ್ಜಿಯಲ್ಲಿ ನಾನು ಹೋಗುತ್ತಿದ್ದ ಬೈಕಿನ ಮಾಲೀಕರು ಮತ್ತು ವಿಮಾ ಕಂಪನಿಯನ್ನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಅಂದರೆ ಸರಿ. ಅಪಘಾತದ ಬಗ್ಗೆ ದೂರನ್ನು ನಾನೇ ನೀಡಿರುತ್ತೇನೆ. ಅಪಘಾತ ನನ್ನ ತಪ್ಪಿನಿಂದ ಆಗಿರುವುದನ್ನು ಮುಚ್ಚಿ ಹಾಕಲು ಸುಳ್ಳು ದೂರನ್ನು ನೀಡಿರುತ್ತೇನೆ ಅಂದರೆ ಸರಿಯಲ್ಲ.

ಅಪಘಾತ ಕಾಲಕ್ಕೆ ನನಗೆ 24 ವರ್ಷ ವಯಸ್ಸಾಗಿತ್ತು ಎಂದು ತೋರಿಸಲು ಜನನ ಪ್ರಮಾಣ ಪತ್ರವನ್ನು ಹಾಜರುಪಡಿಸಿರುವುದಿಲ್ಲ ಆದರೆ ಆಧಾರ ಕಾರ್ಡನ್ನು ಹಾಜರುಪಡಿಸಿರುತ್ತೇನೆ. ನಾನು ಭಾರತ್ ಪೇಟ್ರೊಲಿಯಂನಲ್ಲಿ ಕೆಲಸ ಮಾಡುತ್ತಿದ್ದೆ ಎಂದು ತೋರಿಸಲು ನೇಮಕಾತಿ ಪತ್ರವನ್ನಾಗಲೀ ಅಥವಾ ಹಾಜರಾತಿ ವಹಿಯನ್ನಾಗಲೀ ಹಾಜರುಪಡಿಸಿರುವುದಿಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ, ಈ ಅರ್ಜಿಗೆ ಅನುಕೂಲವಾಗಲೆಂದು ಕೆಲಸ ಮಾಡುತ್ತಿದ್ದುದ್ದಾಗಿ ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನಾನು ತಿಂಗಳಿಗೆ ರೂ.12 ಸಾವಿರ ಆದಾಯ ಗಳಿಸುತ್ತಿದ್ದೆ ಎಂದು ಯಾವುದೇ ದಾಖಲೆ ಹಾಜರುಪಡಿಸದಿದ್ದು ನಾನು ಅಷ್ಟು ಆದಾಯ ಗಳಿಸುತ್ತಿರಲಿಲ್ಲ ಅಂದರೆ ಸರಿಯಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ಆದಾಯ ಗಳಿಸುತ್ತಿರಲಿಲ್ಲ ಅಂದರೆ ಸರಿಯಲ್ಲ.

ನಿ.ಪಿ.6 ರ ಪ್ರಕಾರ ನನಗೆ ಆದ ಗಾಯಗಳು ಸಾದಾ ಸ್ವರೂಪದ ಗಾಯಗಳಾಗಿದ್ದು ಕೆಲವೇ ದಿನಗಳಲ್ಲಿ ನಾನು ಮೊದಲಿನಂತೆ ಆರಾಮಾಗಿರುತ್ತೇನೆ ಅಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ತಾವು ಈಗಲೂ ಚಿಕಿತ್ಸೆ ಪಡೆಯುತ್ತಿರುವುದಾಗಿ ನುಡಿಯುತ್ತಾರೆ. ನನಗೆ ಯಾವುದೇ ಶಾಶ್ವತ ಅಂಗನ್ಯೂನತೆ ಉಂಟಾಗಿಲ್ಲದಿದ್ದು ನಾನು ಪರಿಹಾರ ಪಡೆಯಲು ಅರ್ಹನಲ್ಲ ಅಂದರೆ ಸರಿಯಲ್ಲ.

ಅಪಘಾತದ ನಂತರ ನಾನು ಧಾರವಾಡದ ಸಿವಿಲ್ ಆಸ್ಪತ್ರೆಗೆ ಹೋಗಿರುತ್ತೇನೆ. ಅಲ್ಲಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ನಾನು ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ. ಸರಕಾರಿ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಇದ್ದರೂ ನಾನು ಉದ್ದೇಶಪೂರ್ವಕವಾಗಿ ಪರಿಹಾರ ಪಡೆಯುವ ಉದ್ದೇಶದಿಂದ ಎಸ್.ಡಿ.ಎಂ.ಆಸ್ಪತ್ರೆಗೆ ದಾಖಲಾಗಿರುತ್ತೇನೆ ಅಂದರೆ ಸರಿಯಲ್ಲ. ನನಗೆ ಶಸ್ತ್ರ ಚಿಕಿತ್ಸೆ ಆದ ಬಗ್ಗೆ ಯಾವುದೇ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ ಅಂದರೆ ಸರಿಯಲ್ಲ. ನಾನು ನನಗೆ ಆದ ಗಾಯಕ್ಕೆ ಸಂಬಂಧಿಸಿದಂತೆ ಯಾವುದೇ ಎಕ್ಸ್-ರೇ ಅನ್ನು ಹಾಜರುಪಡಿಸಿರುವುದಿಲ್ಲ. ನನಗೆ ಸಾದಾ ಸ್ವರೂಪದ ಗಾಯಗಳಾಗಿದ್ದರೂ ಅರ್ಜಿಯಲ್ಲಿ ಸುಳ್ಳು ಬರೆಸಿರುತ್ತೇನೆ ಅಂದರೆ ಸರಿಯಲ್ಲ.

ಎಸ್.ಡಿ.ಎಂ. ಆಸ್ಪತ್ರೆಯಲ್ಲಿ ನನಗೆ ಶಸ್ತ್ರ ಚಿಕಿತ್ಸೆ ಮಾಡಿದ ವೈದ್ಯರ ಹೆಸರು ಡಾಕ್ಟರ್.ಅನೀಲ ಆಗಿರುತ್ತದೆ. ನಾನು ಚಿಕಿತ್ಸೆಗಾಗಿ ರೂ.1 ಲಕ್ಷ ಖರ್ಚು ಮಾಡಿರುವುದಾಗಿ ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನನಗೆ ಸಾದಾ ಸ್ವರೂಪದ ಗಾಯಗಳಾಗಿದ್ದು ನಾನು ಚಿಕಿತ್ಸೆ ಪಡೆದು ಗುಣಮುಖನಾಗಿದ್ದು ಯಾವುದೇ ಮುಂದುವರೆದ ಚಿಕಿತ್ಸೆಯ

ಅವಶ್ಯಕತೆ ಇರುವುದಿಲ್ಲ ಅಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ವೈದ್ಯಕೀಯ ಬಿಲ್ಲುಗಳಿಗೆ ಸಂಬಂಧಿಸಿದ ಸಲಹಾ ಚೀಟಿಗಳನ್ನು ಹಾಜರುಪಡಿಸಿರುವುದಿಲ್ಲ ಅಂದರೆ ಸರಿಯಲ್ಲ. ಪರಿಹಾರ ಪಡೆಯುವ ಸಲುವಾಗಿ ವೈದ್ಯಕೀಯ ಬಿಲ್ಲುಗಳನ್ನು ಸೃಷ್ಠಿಸಿ ಹಾಜರುಪಡಿಸಿರುತ್ತೇನೆ ಅಂದರೆ ಸರಿಯಲ್ಲ. ಔಷಧಿಗಳನ್ನು ಹಿಂದಿರುಗಿಸಿದ ಬಿಲ್ಲುಗಳನ್ನು ಸೇರಿಸಿ ಹಾಜರುಪಡಿಸಿರುತ್ತೇನೆ ಅಂದರೆ ಸರಿಯಲ್ಲ. ನಾನು ಹಾಜರುಪಡಿಸಿದ ಕೆಲವು ವೈದ್ಯಕೀಯ ಬಿಲ್ಲುಗಳಲ್ಲಿ ಸೀಲು ಮತ್ತು ಸಹಿ ಇರುವುದಿಲ್ಲ ಅಂದರೆ ಸರಿ. ಅವುಗಳನ್ನು ಸೃಷ್ಠಿ ಮಾಡಿ ಹಾಜರುಪಡಿಸಿರುತ್ತೇನೆ ಅಂದರೆ ಸರಿಯಲ್ಲ.

ಟಿಪ್ಪರ್ ಚಾಲಕನಿಗೆ ಡಿ.ಎಲ್.ಇರಲಿಲ್ಲ ಅಂದರೆ ಸರಿಯಲ್ಲ. ಅಪಘಾತ ಟಿಪ್ಪರ್ ಚಾಲಕನ ತಪ್ಪಿನಿಂದ ಆಗಿರುವುದಿಲ್ಲ, ಆದ್ದರಿಂದ 2ನೇ ಎದುರುದಾರರು ಪರಿಹಾರ ನೀಡಲು ಬಾದ್ಯಸ್ಥರಲ್ಲ ಅಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಅದೆ.

ಸಹಿ/-

2ನೇ ಹೆ ಹಿ ದಿ ನ್ಯಾ ಮತ್ತು ಜೆಎಂಎಫಸಿ

ಧಾರವಾಡ.